**ದಿನಾಂಕ: 21-05-2022 ರಂದು 10-00 ಗಂಟೆಗೆ ಡಾ. ಸುರೇಶ್, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-179 (ಶಾಖಾಂಬರಿನಗರ) ನಡೆದ ಸಭೆಯ ನಡಾವಳಿಗಳು:** -

## : ಚರ್ಚೆಯಾದ ವಿಷಯಗಳು :

1. ವಾಡ್-179ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ರಸ್ತೆ ಕಾಮಗಾರಿಗಳ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 179ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಜೆ.ಪಿ.ನಗರ ಬೆಸ್ಕಾಂ ಅಭಿಯಂತರರು |
| ಸದಸ್ಯರುಗಳು | ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು |
| ಸದಸ್ಯರುಗಳು | ಅರಣ್ಯ ಸಂರಕ್ಷಣಾಧಿಕಾರಿಗಳು |
| ಸದಸ್ಯರುಗಳು | ಬೀದಿ ದೀಪ ನಿರ್ವಹಣಾ ಅಭಿಯಂತರರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ರಸ್ತೆ ಮೂಲಭೂತ ಸೌಕರ್ಯ (ದಕ್ಷಿಣ) |
| ಸದಸ್ಯರುಗಳು | ಯೋಜನೆ (ದಕ್ಷಿಣ) |
| ಸದಸ್ಯರುಗಳು | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| ಸದಸ್ಯರುಗಳು | ಬೃಹತ್ ನೀರುಗಾಲುವೆ ಅಭಿಯಂತರರು |
| ಸದಸ್ಯರುಗಳು | ತೋಟಗಾರಿಕಾ ಅಧೀಕ್ಷಕರು (ದಕ್ಷಿಣ) |
| ಸದಸ್ಯರುಗಳು | ನಾಗರೀಕ ಕಲ್ಯಾಣ ಸಂಘ |

## :ನಡಾವಳಿಯ ವರದಿ:

- ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಮನೋಹರ್ .ಡಿ, ಸಹಾಯಕ ಅಭಿಯಂತರರು ವಾರ್ಡ್ 179 ಶಾಖಾಂಬರಿನಗರ, ಜೆ.ಪಿ.ನಗರ ಉಪವಿಭಾಗ ರವರು ಮಾತನಾಡುತ್ತಾ ಸಭೆಗೆ ಹಾಜರಾದ ವಾರ್ಡ್ ಸಮಿತಿಯ ಮಾನ್ಯ ಅಧ್ಯಕ್ಷರು, ಸದಸ್ಯರು ಹಾಗೂ ಪಾಲಿಕೆಯ ಮತ್ತು ಎಲ್ಲಾ ಇಲಾಖೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- 45ನೇ ಅಡ್ಡರಸ್ತೆ ಮತ್ತು 46ನೇ ಅಡ್ಡರಸ್ತೆ ಜಯನಗರ 8ನೇ ಬಡಾವಣೆಯಲ್ಲಿ ಬೀದಿ ದೀಪಗಳು ರಾತ್ರಿ 10.00 ಗಂಟೆಯ ನಂತರ ಸ್ಥಗಿತಗೊಳ್ಳುತ್ತಿರುವುದಾಗಿ ತಿಳಿದುಬಂದಿರುತ್ತದೆ ಆದ ಕಾರಣ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಲಾಯಿತು.

ಕ್ರಮ :- ಬೀದಿ ದೀಪ ನಿರ್ವಹಣೆ ವಿಭಾಗ (ದಕ್ಷಿಣ)

ಪು.ತಿ.ನೋ.

- ಸ್ವತ್ತಿನ ಸಂಖ್ಯೆ 510, 46ನೇ ಅಡ್ಡರಸ್ತೆಯ ಮನೆಯ ಮುಂಭಾಗದಲ್ಲಿ ಕಸ ಹಾಕುತ್ತಿರುವುದಾಗಿ ಹಾಗೂ ಮ್ಯಾನ್‌ಹೋಲ್‌ನಿಂದ ನೀರು ಹೊರಹೊಮ್ಮುತ್ತಿರುವುದಾಗಿ ಕೂಡಲೇ ಕ್ರಮ ಕೈಗೊಳ್ಳಲು ತಿಳಿಸಲಾಯಿತು ಕ್ರಮ :- **ಬಿಡಬ್ಲ್ಯೂಎಸ್‌ಎಸ್‌ಬಿ, ಜೆ.ಪಿ.ನಗರ ಹಾಗೂ ಸ.ಕಾ.ನಿ.ಅ., ಎಸ್.ಡಬ್ಲ್ಯೂ.ಎಂ., ಜಯನಗರ ವಿಭಾಗ**

- ಪೌರ ಕಾರ್ಮಿಕರಲ್ಲಿ Shredder Machine ಕೊರತೆ ಕಂಡುಬಂದಿರುತ್ತದೆ. Shredder Machine ಗಳನ್ನು ಪೂರಕವಾಗಿ ಬಳಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಲು ಕೋರಲಾಯಿತು. **ಕ್ರಮ :- ಸ.ಕಾ.ನಿ.ಅ., ಎಸ್.ಡಬ್ಲ್ಯೂ.ಎಂ., ಜಯನಗರ ವಿಭಾಗ**

- 9ನೇ ಎ ಮುಖ್ಯರಸ್ತೆಯಲ್ಲಿ ಚರಂಡಿ ಮೋರಿಯಲ್ಲಿ ಹೂಳೆತ್ತುವ ಕಾಮಗಾರಿಯ ಬಗ್ಗೆ ಚರ್ಚಿಸಲಾಯಿತು.

  **ಕ್ರಮ :-ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಜೆ.ಪಿ.ನಗರ ಉಪ ವಿಭಾಗ**

- Public Health & Larval ಸರ್ವೇಯನ್ನು ಮಾಡುತ್ತಿದ್ದು, ಅದರ Breading Index ನ್ನು ನೀಡಲು ಕೋರಿರುವ ಬಗ್ಗೆ. **ಕ್ರಮ :- ಸ.ಕಾ.ನಿ.ಅ., ಎಸ್.ಡಬ್ಲ್ಯೂ.ಎಂ.,**

- ಒಣ ಕಸ ಮತ್ತು ಹಸಿ ಕಸ ವಿಂಗಡಣೆ ಮಾಡುವ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಚರ್ಚಿಸಲಾಯಿತು.

  **ಕ್ರಮ :- ಸ.ಕಾ.ನಿ.ಅ., ಎಸ್.ಡಬ್ಲ್ಯೂ.ಎಂ.,**

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಬೆಳಿಗ್ಗೆ 11.00 ಘಂಟೆಗೆ ಇದೇ ರೀತಿಯಾಗಿ ಮಾಸಿಕ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, (ಜೆ.ಪಿ.ನಗರ) ಉಪವಿಭಾಗದ ಶ್ರೀ ಮನೋಹರ್ ಡಿ. ಸಹಾಯಕ ಇಂಜಿನಿಯರ್ ವಾರ್ಡ್ 179 ಶಾಖಾಂಬರಿನಗರ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು ವಾರ್ಡ್ 179
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ